ಚಿಕ್ಕೋಡಿ ತಾಲ್ಲೂಕಿನ ಪಶುಸಂಗೋಪನಾ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರು ಹಾಗೂ ನೌಕರರ ಹುದ್ದೆಗಳು

1277 (1518) ಶ್ರೀ ಕಟ್ಟಿಮನಿ ಮನೋಹರ ಶಿವಪುತ್ರ (ಚಿಕ್ಕೋಡಿ) : ಮಾನ್ಯ ಪಶುಸಂಗೋಪನಾ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಚಿಕ್ಕೋಡಿ ತಾಲ್ಲೂಕಿನ ಯಾವ ಯಾವ ಪಶುಸಂಗೋಪನಾ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರು ಹಾಗೂ ನೌಕರರ ಹುದ್ದೆಗಳೆಷ್ಟು;

ಆ) ಈ ಹುದ್ದೆಗಳನ್ನು ಇದುವರೆವಿಗೂ ಖಾಲಿಬಿಡಲು ಕಾರಣಗಳೇನು;

ಇ) ಚಿಕ್ಕೋಡಿ ತಾಲ್ಲೂಕಿನ ಪಶುವೈದ್ಯ ಶಾಲೆಗಳಿಗೆ ಔಷಧಿಗಳಿಗೆ ಪೂರ್ಣ ಕೊರತೆ ಇರುವುದು ಸರ್ಕಾರಕ್ಕೆ ಗೊತ್ತಿದೆಯೇ;

ಈ) ಹಾಗಿದ್ದಲ್ಲಿ ಈ ದಿಸೆಯಲ್ಲಿ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನಾ ಮತ್ತು ಸಕ್ಕರೆ ಸಚಿವರು) :

ಅ) ಯಾವುದು ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಜಿಲ್ಲಾ ಪಂಚಾಯತ್ ಮತ್ತು ಕುರಿ ಮಂಡಳಿಯು ಅನುಕ್ರಮವಾಗಿ ರೂ. 8. 18 ಲಕ್ಷಗಳು ಹಾಗೂ ರೂ. 17.03 ಲಕ್ಷಗಳನ್ನು ಬೆಳಗಾಂ ಜಿಲ್ಲೆಗೆ 1999-2000ನೇ ಸಾಲಿನಲ್ಲಿ ವಿತರಿಸಲಾಗಿದೆ.

ಈ) ಈ ವರ್ಷ ಪೂರೈಕೆಯನ್ನು ಹೆಚ್ಚಿಸಲು ಪ್ರಯತ್ನಿಸಲಾಗುವುದು.

ಕುಮಟಾ ತಾಲ್ಲೂಕು ಬ್ರಹ್ಮಾವರದಲ್ಲಿ ಅರಣ್ಯ ಭೂಮಿಯನ್ನು ಒತ್ತುವರಿ ಮಾಡಿ ಕೊಂಡಿರುವುದು.

1278 (1651) ಶ್ರೀ ಕಟ್ಟೀಮನಿ ಮನೋಹರ ಶಿವಪುತ್ರ (ಚಿಕ್ಕೋಡಿ) : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕುಮಟಾ ತಾಲ್ಲೂಕು ಬ್ರಹ್ಮಾವರದಲ್ಲಿ ಸಾರ್ವಜನಿಕರು ಅರಣ್ಯ ಭೂಮಿಯನ್ನು ಅತಿಕ್ರಮಣ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಅತಿಕ್ರಮಣ ಮಾಡಿಕೊಂಡಿರುವ ಭೂಮಿಯ ವಿಸ್ತೀರ್ಣ ಎಷ್ಟು? ಅತಿಕ್ರಮಣ ಮಾಡಿಕೊಂಡಿರುವ ಜನರೆಷ್ಟು? ಇದರಲ್ಲಿ 5 ಎಕರೆ ಭೂಮಿಗೂ ಮೇಲ್ಪಟ್ಟು ಅತಿಕ್ರಮಣ ಮಾಡಿಕೊಂಡಿರುವವರ ಸಂಖ್ಯೆ ಎಷ್ಟು?

ಇ) ಅರಣ್ಯ ಭೂಮಿಯನ್ನು ಅತಿಕ್ರಮಣ ಮಾಡಿಕೊಂಡಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?